# ಕರ್ನಾಟಕ ಸರ್ಕಾರದ ನಡವಳಿಗಳು

## ಸುವರ್ಣ ಕರ್ನಾಟಕ–2006

ವಿಷಯ: ಪವನ ವಿದ್ಯುತ್ ಯೋಜನೆ ಅಭಿವೃದ್ಧಿಗಾಗಿ ಹಂಚಿಕೆ ಆದೇಶ.

ಓದಲಾಗಿದೆ: 1) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ : ಕೆಆರ್‌ಇಡಿ/08/ಫೋರ್–ಇಎಫ್/2006/1702 ದಿನಾಂಕ: 26.7.2006.

2) ದಿನಾಂಕ: 3.8.2006 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

* * *

**ಪ್ರಸ್ತಾವನೆ:**

ಓದಲಾದ (1)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು M/s Four EF Wind Power Private Limited ಕಂಪನಿಗೆ ಗುಲ್ಬರ್ಗಾ, ಬಾಗಲಕೋಟೆ ಮತ್ತು ಬೆಳಗಾಂ ಜಿಲ್ಲೆಗಳಲ್ಲಿ 56.5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಓದಲಾದ (2)ರಲ್ಲಿ ಹೇಳಿದ ಹಂಚಿಕೆ ಸಮಿತಿ ಸಭೆ ನಡವಳಿಯ ಪವನ ವಿದ್ಯುತ್ ಯೋಜನೆ ಹಂಚಿಕೆಯ ಕ್ರಮ ಸಂಖ್ಯೆ: 12 ರಲ್ಲಿ ಶಿಫಾರಸಿಸ್ಸಿದ್ದರನ್ವಯ ಕೂಲಂಕಷವಾಗಿ ಪರಿಶೀಲಿಸಿದ್ದು ನಂತರ ಈ ಕೆಳಗಿನಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 318 ಎನ್‌ಸಿಇ 2006,**
**ಬೆಂಗಳೂರು, ದಿನಾಂಕ: 16.10.2006.**

M/s Four EF Wind Power Private Limited ಕಂಪನಿಗೆ ಗುಲ್ಬರ್ಗಾ, ಬಾಗಲಕೋಟೆ ಮತ್ತು ಬೆಳಗಾಂ ಜಿಲ್ಲೆಗಳಲ್ಲಿ 56.5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಕೆಳಗೆ ವಿವರಿಸಿರುವಂತೆ ಈ ಕೆಳಗಿನ ನಿಬಂಧನೆಗೊಳಪಟ್ಟು ಹಂಚಿಕೆ ಮಾಡಿದೆ:-

| Sl. No | Proposed capacity in MW | Near by villages of the proposed area and district. | Geographical area description of the project |
|---|---|---|---|
| 1. | 20MW (80x250kW) | Gonagi, Mukramba, Halsagud, Mogha, **Gulbarga** | The proposed area consists of several ridges and are mostly orientated in NE-SW direction and are located on the East of Ramangud RF and Ratkal. The area appears to have open scrub features covered with stony waste and it is located in Ramangud RF. It has several peaks and spread across the villages as mentioned under column 4. It is covered in the following Geographical co-ordinates:<br><br>**Latitude:** 17°26'28"- 17°30'0" N<br>**Longitude:** 77°6'31"- 77°15'0" E<br>**Ridge peaks:** 459, 531,479, 626, 642, 624, 593 and 561m Amsl. |

...........2)

Sl. no. 2 Area proposed for transfer with coordinates

| | | | |
|---|---|---|---|
| 2 | 12.5MW (50x250kW) | Melligeri, Yadbhalli, Mantur, Hunchibenchi, **Bijapur/ Bagalkot District** | The identified area is in triangular shape held in between Amalihari and Halagali, Bisnal. It is located in the Reserve Forest and has dense scrub feature and has an average elevation of 675m. It is covered in the following Geographical co-ordinates:<br><br>**Latitude:** 16°19'17"- 16°23'32" N<br>**Longitude:** 75°24'31"- 75°30'0" E<br>**Ridge peaks:** 650, 651, 662, 706, 667 and 685m Amsl. |
| 3. | 12.5MW (50x250kW) | Hire gudda, Arakeritanda, Jamatti tanda, Bilgi, **Bijapur/ Bagalkot District** | Identified place is a large plateau and has EW orientation located on the SE of Beligi and situated in the Reserve Forest. It has dense scrub feature and is called as Hire Gudda. It has several peaks and spread around the villages as mentioned in column 4. The average elevation of the area is 675m and it is covered in the following Geographical co-ordinates:<br><br>**Latitude:** 16°17'57"- 16°21'31" N<br>**Longitude:** 75°30'0"- 75°38'23" E<br>**Ridge peaks:** 664, 598, 671, 670, 636, 681, 613, 652, 672, 698, 676, 648, 652, 658, 608, 602, 638 and 637m Amsl. |
| 4. | 11.5MW (27x250kW) | Parthanahalli, Yelihadalgi, Bedrahatti, Gundewadi, **Belgaum District.** | Identified area is a ground level plain with gentle elevation has NE-SW orientation. It is located on the West of Chamkeri village and has average elevation of 600m and it is held in the following Geographical co-ordinates:<br>**Latitude:** 16°45'0"- 16°48'58" N<br>**Longitude:** 75°5'47"- 75°10'0" E<br>**Ridge peaks:** 617, 628, 621, 571, 592, 612, 615 and 586m Amsl |
| **Total** | | **56.5MW** | |

1. ಯೋಜನಾಭಿವೃದ್ಧಿದಾರರು ಸರ್ಕಾರದೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಮೊದಲು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಮೆಗಾ ವ್ಯಾಟ್ ಒಂದಕ್ಕೆ ರೂ 25,000 ದಂತೆ ವಿವರವಾದ ಯೋಜನಾ ವರದಿ ಪರಿಷ್ಕರಣ ಶುಲ್ಕವನ್ನು ತುಂಬುವುದು.
2. ಈ ಆದೇಶ ಹೊರಡಿಸಿದ ದಿನಾಂಕದಿಂದ 3 ತಿಂಗಳ ಒಳಗೆ ಯೋಜನಾಭಿವೃದ್ಧಿದಾರರು ರೂ.400ರ ಛಾಪಾ ಕಾಗದದಲ್ಲಿ ಸರ್ಕಾರದೊಂದಿಗೆ ಒಡಂಬಡಿಕೆಯನ್ನು ಮಾಡಿಕೊಳ್ಳುವುದು. ತಪ್ಪಿದಲ್ಲಿ ಈ ಹಂಚಿಕೆ ಆದೇಶ ತಂತಾನೆ ರದ್ದಾಗಿದೆ ಎಂದು ಭಾವಿಸುವುದು.

..................3)

3. ಹಂಚಿಕೆದಾರರು ಪೂರ್ತಿ ಒಂದು ಪವನ ವರ್ಷಕ್ಕೆ ಕಡಿಮೆ ಇಲ್ಲದಂತೆ 10 ಮೀಟರ್ ಮತ್ತು ಹಬ್ ಹೈಟ್ ಮಟ್ಟದಲ್ಲಿ ಪವನ ವೇಗದ ಅಳತೆಯನ್ನು ಮಾಡಿಕೊಳ್ಳಬೇಕು. ಅಲ್ಲದೇ, ಕಾಲ ಕಾಲಕ್ಕೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದಿಂದ ಹೊರಡಿಸತಕ್ಕ ಮಾರ್ಗಸೂಚಿಗಳಿಗನುಗುಣವಾಗಿ ಮೈಕ್ರೊ ಸ್ಟೆಟಿಂಗ್ ಮಾಡಿರುವ ಅಂಶಗಳನ್ನೊಳಗೊಂಡ ವಿವರವಾದ ಯೋಜನಾ ವರದಿಗಳ 3 ಪ್ರತಿಗಳನ್ನು ತಯಾರಿಸಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಮಂಡಿಸಬೇಕು. ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್ ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

4. ಗಾಳಿ ಚಕ್ರದ ಹಬ್ ಹೈಟಿನಲ್ಲಿ ಪವನ ವೇಗದ ಅಳತೆ ಖಾತರಿ ಪಡಿಸಲು ಕೆಳಗಿನ ಕೋಷ್ಠಕದಲ್ಲಿ ವಿವರಿಸಿರುವಂತೆ ಪ್ರತಿ 5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಒಂದರಂತೆ ಗಾಳಿ ಕಂಬವನ್ನು (ವಿಂಡ್ ಮಾಸ್ಟ್) ಅಳವಡಿಸಬೇಕು. ಅಳತೆ ವಿವರಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವುದು.

| ಗಾಳಿ ಶಕ್ತಿ ವಿದ್ಯುತ್ತಿನ ದೂರ ಸಾಮರ್ಥ್ಯ | 5 ಮೆಗಾವ್ಯಾಟ್ ಗಾಳಿ ಯೋಜನೆಯಲ್ಲಿ ಸಾಧಾರಣ ಗಾಳಿ ಶಕ್ತಿ ವಿದ್ಯುತ್ತಿನ ಸಂಖ್ಯೆ | ಹಾಕಬೇಕಾಗಿರುವ ಗಾಳಿ ಕಂಬ (ವಿಂಡ್ ಮಾಸ್ಟ್‌ಗಳ ಸಂಖ್ಯೆ |
|---|---|---|
| > 200 ಕಿ.ವ್ಯಾ. ನಿಂದ 300 ಕಿ.ವ್ಯಾ. | 18 | 1 |
| > 300 ಕಿ.ವ್ಯಾ. ನಿಂದ 500 ಕಿ.ವ್ಯಾ. | 15 | 1 |
| > 500 ಕಿ.ವ್ಯಾ. ನಿಂದ 750 ಕಿ.ವ್ಯಾ. | 12 | 1 |
| > 750 ಕಿ.ವ್ಯಾ. ನಿಂದ 1000 ಕಿ.ವ್ಯಾ. | 8 ರಿಂದ 10 | 1 |

5. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

6. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ/ಕಂದಾಯ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು.

7. ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ/ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ನೀತಿ ನಿಯಮಗಳಿಗನುಗುಣವಾಗಿ ವೀಲಿಂಗ್ ಮತ್ತು ಬ್ಯಾಂಕಿಂಗ್/ವಿದ್ಯುತ್ ಖರೀದಿ ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಲಾಗಿದೆ.

8. ಕಾಲ ಕಾಲಕ್ಕೆ ಇರುವ ನೀತಿ ನಿಯಮಗಳಿಗೆ ಅನುಗುಣವಾಗಿ ಯಂತ್ರೋಪಕರಣಗಳಿಗೆ ಪ್ರವೇಶ ತೆರಿಗೆಯಿಂದ ವಿನಾಯಿತಿ ನೀಡಲಾಗಿದೆ.

9. ಯೋಜನೆಯನ್ನು ತ್ವರಿತವಾಗಿ ಮುಕ್ತಾಯ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವಂತೆ ವಿನಂತಿಸಲಾಗಿದೆ.

______ 4)

10. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆ ಮಾತ್ರ ಸಿಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.
11. ಪ್ರಸ್ತುತ ಹಂಚಿಕೆ ಸಮಿತಿ ಸಭೆಯಲ್ಲಿ ಶಿಫಾರಸ್ಸು ಮಾಡಿರುವ ಕಂಪನಿಗಳಿಗೆ 2006-07 ನೇ ಸಾಲಿನಲ್ಲಿ 100 ಮೆಗಾ ವ್ಯಾಟ್‌ಗೆ ಮೀರದಂತೆ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಗಳೊಂದಿಗೆ ಮೊದಲ ಅರ್ಜಿದಾರರಿಗೆ ಆದ್ಯತೆ ಮೇಲೆ ವಿದ್ಯುತ್ ಖರೀದಿ ಒಡಂಬಡಿಕೆಯನ್ನು (ಪಿ.ಪಿ.ಎ) ಮಾಡಿಕೊಳ್ಳತಕ್ಕದ್ದು.
12. ಎಲ್ಲಾ ಅಭಿವೃದ್ಧಿದಾರರು ಖುದ್ದಾಗಿ ಯೋಜನೆಗಳನ್ನು ಯಂತ್ರೋಪಕರಣಗಳೊಂದಿಗೆ ಅನುಷ್ಠಾನಗೊಳಿಸಬೇಕು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸುರೇಶ್ ಬಿ. ಕೃಷ್ಣಪ್ಪನವರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ :
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು - ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಅದರ 50 ಪ್ರತಿಗಳನ್ನು ಕಳುಹಿಸಲು ಕೋರಲಾಗಿದೆ.

<u>ಪ್ರತಿ :</u>
1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಇಂಧನ ಇಲಾಖೆ ,ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ ಹಾಗೂ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ವಿಕಾಸ ಸೌಧ, ಬೆಂಗಳೂರು-1.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.19, ಮೇಜರ್ ಜನರಲ್ ಎ.ಡಿ.ಲೋಗನಾದನ್ ಐ.ಎನ್.ಎ. ಅಡ್ಡ ರಸ್ತೆ, ಕ್ವೀನ್ಸ್ ರಸ್ತೆ, ಬೆಂಗಳೂರು-52.
4. ಜಿಲ್ಲಾಧಿಕಾರಿಗಳು, ಬಾಗಲಕೋಟೆ, ಗುಲ್ಬರ್ಗಾ ಮತ್ತು ಬೆಳಗಾಂ ಜಿಲ್ಲೆಗಳು.
5. M/s Four EF Wind Power Private Limited, Flat No: 1-B, No: 9, Lucellee Court, Berlie Street, Langford Town, Bangalore-25.
6. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.